# ಕರ್ನಾಟಕ ಅರಣ್ಯ ಇಲಾಖೆ

## ಪ್ರಕಟಣೆ

### ವನಪಾಲಕ ಮತ್ತು ಅರಣ್ಯ ರಕ್ಷಕ ಹುದ್ದೆಗಳ ನೇರ ನೇಮಕಾತಿ-2009

ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-1/2009-10 ದಿನಾಂಕ 26-09-2009

****

ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003 ರನ್ವಯ ಅರಣ್ಯ ಇಲಾಖೆಯಲ್ಲಿ 218 ವನಪಾಲಕ ಮತ್ತು 863 ಅರಣ್ಯ ರಕ್ಷಕ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಈ ಕಚೇರಿಯಲ್ಲಿ ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಹಾಗೂ ಸಮಯದೊಳಗೆ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿದಾಗ, ಹಲವಾರು ಅಭ್ಯರ್ಥಿಗಳು ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡದೇ ಇರುವುದು ಕಂಡುಬಂದಿರುತ್ತದೆ ಹಾಗೂ ಕೆಲವು ಅಭ್ಯರ್ಥಿಗಳು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ವಿಭಿನ್ನ ಮಾಹಿತಿ ನಮೂದಿಸಿ ಸಲ್ಲಿಸಿರುತ್ತಾರೆ. ಇಂತಹ ಅರ್ಜಿಗಳ ಪಟ್ಟಿಯನ್ನು ಅನುಬಂಧ-1 ರಲ್ಲಿ ತಯಾರಿಸಲಾಗಿದೆ.

**ಇಂತಹ ಅರ್ಜಿಗಳ ಬಗ್ಗೆ ಸೂಕ್ತ ನಿರ್ಣಯ ತೆಗೆದುಕೊಳ್ಳಲು ಸಾಧ್ಯವಾಗದೇ ಇರುವುದರಿಂದ ಈ ಪಟ್ಟಿಯಲ್ಲಿ ನಮೂದಿಸಿರುವ ಅಭ್ಯರ್ಥಿಗಳಿಗೆ ಅವರ ಹೆಸರಿನ ಎದುರು ತೋರಿಸಿರುವ ನ್ಯೂನತೆ (Error) ಗಳನ್ನು ಸರಿಪಡಿಸಲು ಅವರಿಗೆ ಅವಕಾಶ ನೀಡಲಾಗಿರುತ್ತದೆ. ಈ ನ್ಯೂನತೆಗಳನ್ನು ಸರಿಪಡಿಸಲು ಅಭ್ಯರ್ಥಿಗಳು ಅವಶ್ಯಕ ಮಾಹಿತಿ ನೀಡಿ, ಲಿಖಿತ ರೂಪದಲ್ಲಿ ಮನವಿ ಸಲ್ಲಿಸಬಹುದಾಗಿದೆ ಹಾಗೂ ವಿಭಿನ್ನ ಮಾಹಿತಿ ನೀಡಿ ಸಲ್ಲಿಸಿರುವ ಅರ್ಜಿಗಳ ಪೈಕಿ ಯಾವ ಅರ್ಜಿಯನ್ನು ಪರಿಗಣನೆಗೆ ತೆಗೆದುಕೊಳ್ಳಬೇಕೆಂಬುದನ್ನು ತಿಳಿಸುವ ಕುರಿತು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿರುವ ಅಭ್ಯರ್ಥಿಗಳು ಸಹ ಲಿಖಿತ ರೂಪದಲ್ಲಿ ಮನವಿ ಸಲ್ಲಿಸಬಹುದಾಗಿದೆ.**

**ಅನುಬಂಧ-1ರ ಪಟ್ಟಿಯನ್ನು ಕರ್ನಾಟಕ ಅರಣ್ಯ ಇಲಾಖೆಯ Website: www.karnatakaforest.gov.in ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಈ ಮಾಹಿತಿಯು ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-3 ಮತ್ತು ರಾಜ್ಯದ ಎಲ್ಲಾ ವೃತ್ತಗಳ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ (ಪ್ರಾದೇಶಿಕ) ಕಚೇರಿಗಳಲ್ಲಿ ಸಹ ಲಭ್ಯವಿರುತ್ತದೆ.**

ಅಭ್ಯರ್ಥಿಗಳು ತಮ್ಮ ಮನವಿಗಳನ್ನು ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರ ಸ್ಥಾನ), ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, 1ನೇ ಮಹಡಿ, ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003 ಇವರಿಗೆ ದಿನಾಂಕ 18-03-2010ರ ಅಪರಾಹ್ನ 5.30 ಗಂಟೆಯೊಳಗಾಗಿ ಪೂರ್ಣ ದಾಖಲೆಗಳೊಂದಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಬರುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ಬೆಂಗಳೂರು,
ದಿನಾಂಕ: 17-02-2010

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
ಹಾಗೂ ಆಯ್ಕೆ ಪ್ರಾಧಿಕಾರ.